**National**
**Kannada**
**10.08.2025 1.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಬೆಂಗಳೂರಿನಲ್ಲಿಂದು ಮೂರು ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳು, ನಮ್ಮ ಮೆಟ್ರೋ ಹಳದಿ ಮಾರ್ಗಕ್ಕೆ ಪ್ರಧಾನಿ ನರೇಂದ್ರ ಮೋದಿ ಚಾಲನೆ
2. ಆಪರೇಷನ್ ಸಿಂದೂರ್: ಭಾರತೀಯ ಸೇನೆಯ ಮೂರು ಪಡೆಗಳ ನಡುವಿನ ಸಮನ್ವಯಕ್ಕೆ ಸಾಕ್ಷಿ- ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್
3. 'ಸಂಡೇ ಆನ್ ಸೈಕಲ್ ವಿತ್ ಪಂಚಾಯತ್' ಉಪಕ್ರಮಕ್ಕೆ ಕೇಂದ್ರ ಸಚಿವ ಮನ್ಸುಖ್ ಮಾಂಡವಿಯ ಚಾಲನೆ
4. ವಿಶ್ವ ಕ್ರೀಡಾಕೂಟ: ಪುರುಷರ ಸಂಯುಕ್ತ ಬಿಲ್ಲುಗಾರಿಕೆ ಸ್ಪರ್ಧೆಯಲ್ಲಿ ಭಾರತದ ರಿಷಭ್ ಯಾದವ್‌ಗೆ ಕಂಚಿನ ಪದಕ

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಬೆಂಗಳೂರಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ರೈಲ್ವೆ ನಿಲ್ದಾಣದಲ್ಲಿ ಮೂರು ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳ ಸಂಚಾರಕ್ಕೆ ಹಸಿರು ನಿಶಾನೆ ತೋರಿದರು. ಬೆಂಗಳೂರು-ಬೆಳಗಾವಿ, ಅಮೃತಸರ-ಶ್ರೀಮಾತಾ ವೈಷ್ಣೋದೇವಿ ಕಟ್ರಾ ಹಾಗೂ ನಾಗ್ಪುರ-ಪುಣೆ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳು ಇವುಗಳಲ್ಲಿ ಸೇರಿವೆ. ಈ ಸಂದರ್ಭದಲ್ಲಿ ಕೇಂದ್ರ ಸಚಿವರಾದ ಅಶ್ವಿನಿ ವೈಷ್ಣವ್, ಮನೋಹರ್‌ಲಾಲ್ ಕಟ್ಟರ್, ಶೋಭಾ ಕರಂದ್ಲಾಜೆ, ವಿ.ಸೋಮಣ್ಣ, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ ಉಪಸ್ಥಿತರಿದ್ದರು. ನಂತರ ಪ್ರಧಾನಿಯವರು ನಮ್ಮ ಮೆಟ್ರೋ ಹಳದಿ ಮಾರ್ಗದ ಕಾರ್ಯಾಚರಣೆಗೆ ಚಾಲನೆ ನೀಡಿದರು. ಬಳಿಕ ಆರ್.ವಿ. ರಸ್ತೆಯ ಮೆಟ್ರೋ ನಿಲ್ದಾಣದಿಂದ ರಾಗಿಗುಡ್ಡ ಮಾರ್ಗವಾಗಿ ಎಲೆಕ್ಟ್ರಾನಿಕ್ ಸಿಟಿ ಮೆಟ್ರೋ ನಿಲ್ದಾಣದವರೆಗೆ ಪ್ರಯಾಣಿಸಿದರು. ಈ ವೇಳೆ ಶಾಲಾ ವಿದ್ಯಾರ್ಥಿಗಳೊಂದಿಗೆ ಪ್ರಧಾನಿ ಸಂವಾದ ನಡೆಸಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಸಂಸದ ತೇಜಸ್ವಿ ಸೂರ್ಯ ಹಾಗೂ ಸಂಸದ ತೇಜಸ್ವಿ ಸೂರ್ಯ ಉಪಸ್ಥಿತರಿದ್ದರು. ಇಂದು ಮಧ್ಯಾಹ್ನ ಪ್ರಧಾನಿಯವರು ವಿವಿಧ ನಗರ ಸಂಪರ್ಕ ಯೋಜನೆಗಳಿಗೆ ಶಿಲಾನ್ಯಾಸ ಹಾಗೂ ಉದ್ಘಾಟನೆ ನೆರವೇರಿಸಿ, ಸಾರ್ವಜನಿಕರನ್ನು ಉದ್ದೇಶಿಸಿ ಮತನಾಡಲಿದ್ದಾರೆ. ಸುಮಾರು ೧೫ ಸಾವಿರದ ೬೧೦ ಕೋಟಿ ರೂಪಾಯಿ ವೆಚ್ಚದ

ಬೆಂಗಳೂರು ಮೆಟ್ರೋ ೩ನೇ ಹಂತದ ಯೋಜನೆಗೂ ಶಿಲಾನ್ಯಾಸ ನೆರವೇರಿಸಲಿದ್ದಾರೆ. ಸುಮಾರು ೪೪ ಕಿಲೋಮೀಟರ್ ಉದ್ದದ ಈ ಮಾರ್ಗ ೩೧ ನಿಲ್ದಾಣಗಳನ್ನು ಹೊಂದಿರಲಿದೆ. ಇದಕ್ಕೂ ಮುನ್ನ ಇಂದು ಬೆಳಗ್ಗೆ ಬೆಂಗಳೂರಿನ ಹೆಚ್.ಕ್ಯೂ.ಟಿ.ಸಿ ಹೆಲಿಪ್ಯಾಡ್‌ಗೆ ಆಗಮಿಸಿದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಆತ್ಮೀಯವಾಗಿ ಬರಮಾಡಿಕೊಂಡರು.

<><><>

'ಆಪರೇಷನ್ ಸಿಂದೂರ್' ಭಾರತೀಯ ಸೇನೆಯ ಮೂರು ಪಡೆಗಳ ನಡುವಿನ ಸಮನ್ವಯ ಮತ್ತು ಕಾರ್ಯಾಚರಣೆಯ ಒಗ್ಗಟ್ಟಿಗೆ ಸಾಕ್ಷಿಯಾಗಿದೆ ಎಂದು ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಹೇಳಿದ್ದಾರೆ. ತೆಲಂಗಾಣದ ಸಿಕಂದರಾಬಾದ್‌ನ ರಕ್ಷಣಾ ನಿರ್ವಹಣಾ ಕಾಲೇಜಿನಲ್ಲಿ ಇಂದು ೨೧ನೇ ಉನ್ನತ ರಕ್ಷಣಾ ನಿರ್ವಹಣಾ ಕೋರ್ಸ್‌ನ ಅಭ್ಯರ್ಥಿಗಳು ಮತ್ತು ಹಿರಿಯ ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಸಶಸ್ತ್ರ ಪಡೆಗಳಲ್ಲಿ ಏಕೀಕರಣದ ಕುರಿತು ಕಾರ್ಯತಂತ್ರದ ದೃಷ್ಟಿಕೋನಗಳನ್ನು ಹಂಚಿಕೊಂಡರು ಮತ್ತು ಜಂಟಿ ಕಾರ್ಯಾಚರಣೆಗಳ ಭವಿಷ್ಯದ ಮಾರ್ಗಸೂಚಿಯನ್ನು ರೂಪಿಸಲು ಪ್ರಮುಖ ಅಂಶಗಳನ್ನು ವಿವರಿಸಿದರು. ತಂತ್ರಜ್ಞಾನ-ಚಾಲಿತ ಆಧುನಿಕ ಯುದ್ಧದಲ್ಲಿನ ವಿಧ್ವಂಸಕ ಬದಲಾವಣೆಗಳನ್ನು ಎದುರಿಸಲು ಸೇನೆಯಲ್ಲಿ ಅನುಸರಿಸಲಾಗುತ್ತಿರುವ ಪರಿವರ್ತನಾಶೀಲ ಬದಲಾವಣೆಗಳ ಸಮಗ್ರ ಸಾಮರ್ಥ್ಯ ಅಭಿವೃದ್ಧಿ, ಆತ್ಮನಿರ್ಭರತೆ ಮತ್ತು ಆಳವಾದ ತಿಳುವಳಿಕೆಯ ಪ್ರಾಮುಖ್ಯತೆಯ ಬಗ್ಗೆಯೂ ಜನರಲ್ ಅನಿಲ್ ಚೌಹಾಣ್ ಒತ್ತಿ ಹೇಳಿದರು.

<><><>

ದೆಹಲಿಯ ಜವಾಹರಲಾಲ್ ನೆಹರು ಕ್ರೀಡಾಂಗಣದಲ್ಲಿ ಇಂದು 'ಸಂಡೇ ಆನ್ ಸೈಕಲ್ ವಿತ್ ಪಂಚಾಯತ್' ಉಪಕ್ರಮಕ್ಕೆ ಕೇಂದ್ರ ಸಚಿವ ಮನ್ಸುಖ್ ಮಾಂಡವಿಯ ಚಾಲನೆ ನೀಡಿದರು. ನೂರಾರು ಯುವಕರು ಮತ್ತು ಫಿಟ್ನೆಸ್ ಉತ್ಸಾಹಿಗಳು ಈ ಅಭಿಯಾನದಲ್ಲಿ ಭಾಗವಹಿಸಿದ್ದರು. ಅಭಿಯಾನ ಉದ್ದೇಶಿಸಿ ಮಾತನಾಡಿದ ಕೇಂದ್ರ ಸಚಿವ ಮನ್ಸುಖ್ ಮಾಂಡವಿಯ, ಜನರು ತಮ್ಮ ದೈನಂದಿನ ಜೀವನದ ಭಾಗವಾಗಿ ಸೈಕ್ಲಿಂಗ್ ಅನ್ನು ಅಳವಡಿಸಿಕೊಳ್ಳುವಂತೆ ಸಲಹೆ ನೀಡಿದರು. ಪ್ರಧಾನಿ ನರೇಂದ್ರ ಮೋದಿಯವರ ಉದ್ದೇಶದಂತೆ ಈ ಕಾರ್ಯಕ್ರಮವನ್ನು ನಡೆಸಲಾಗಿದ್ದು, ಫಿಟ್ ಇಂಡಿಯಾ ಚಾಂಪಿಯನ್‌ಶಿಪ್‌ನ ಭಾಗವಾಗಿ 'ಸಂಡೇ ಆನ್ ಸೈಕಲ್ ವಿತ್ ಪಂಚಾಯತ್' ಅನ್ನು ಆಯೋಜಿಸಲಾಗಿದೆ. ಗ್ರಾಮೀಣ ಪ್ರದೇಶಗಳಿಂದ ಜನತೆಯ ಭಾಗವಹಿಸುವಿಕೆಯನ್ನು ಪ್ರೋತ್ಸಾಹಿಸಲಾಗಿದೆ ಎಂದು ಅವರು ಹೇಳಿದರು.

ಧ್ವನಿ : ಮನ್ಸುಖ್ ಮಾಂಡವೀಯ (೨೩ ಸೆಕೆಂಡ್‌ಗಳು)

<><><>

೨೦೧೯ ರಿಂದ ಆರು ವರ್ಷಗಳ ಕಾಲ ಒಂದೇ ಒಂದು ಚುನಾವಣೆಯಲ್ಲಿ ಸ್ಪರ್ಧಿಸುವ ಅಗತ್ಯ ಷರತ್ತನ್ನು ಪೂರೈಸಲು ವಿಫಲವಾದ ೩೩೪ ನೋಂದಾಯಿತ ಮಾನ್ಯತೆ ಪಡೆಯದ ರಾಜಕೀಯ ಪಕ್ಷಗಳನ್ನು ಪಟ್ಟಿಯಿಂದ ತೆಗೆದುಹಾಕಲಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ. ಈ ೩೩೪ ನೋಂದಾಯಿತ ಮಾನ್ಯತೆ ಪಡೆಯದ ರಾಜಕೀಯ ಪಕ್ಷಗಳು ದೇಶದ ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿವೆ.

<><><>

ಉತ್ತರಾಖಂಡದ ಉತ್ತರಕಾಶಿ ಜಿಲ್ಲೆಯ ಹರ್ಸಿಲ್ ಮತ್ತು ಧರಾಲಿ ಪ್ರದೇಶಗಳಲ್ಲಿ ಇತ್ತೀಚೆಗೆ ಸಂಭವಿಸಿದ ಮೇಘ ಸ್ಫೋಟದ ಹಿನ್ನೆಲೆಯಲ್ಲಿ, ದೊಡ್ಡ ಪ್ರಮಾಣದ ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಗಳು ಪ್ರಗತಿಯಲ್ಲಿವೆ. ಹರ್ಸಿಲ್ ಕಣಿವೆಯಲ್ಲಿ ವಿದ್ಯುತ್ ಸರಬರಾಜನ್ನು ಪುನಃಸ್ಥಾಪಿಸಲಾಗಿದೆ. ಹರ್ಸಿಲ್ ಮತ್ತು ಧರಾಲಿಗೆ ನಿಯಮಿತವಾಗಿ ಡೀಸೆಲ್ ಹಾಗೂ ಅಡುಗೆ ಅನಿಲ ಪೂರೈಕೆಯನ್ನು ಖಚಿತಪಡಿಸಿಕೊಳ್ಳಲಾಗಿದೆ. ರಸ್ತೆ ಅಡಚಣೆಗಳಿಂದಾಗಿ ಆಹಾರ ಸಾಮಗ್ರಿಗಳನ್ನು ಹೇಸರ ಗತ್ತೆಗಳ ಮೂಲಕ ಸಾಗಿಸಲಾಗುತ್ತಿದೆ. ವಿಪತ್ತಿನ ಕಾರಣಗಳನ್ನು ತನಿಖೆ ಮಾಡಲು ಭೂವಿಜ್ಞಾನಿಗಳ ತಂಡಗಳನ್ನು ಉತ್ತರಕಾಶಿ ಮತ್ತು ಪೌರಿ ಜಿಲ್ಲೆಗಳಿಗೆ ಕಳುಹಿಸಲಾಗಿದೆ ಹಾಗೂ ಈ ತಂಡ ಒಂದು ವಾರದೊಳಗೆ ವರದಿ ಸಲ್ಲಿಸುವ ನಿರೀಕ್ಷೆಯಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

<><><>

ಮಹಾರಾಷ್ಟ್ರದ ನಾಗ್ಪುರದ ಕೊರಾಡಿಯಲ್ಲಿರುವ ಮಹಾಲಕ್ಷ್ಮಿ ಜಗದಂಬ ದೇವಸ್ಥಾನದಲ್ಲಿ ನಿರ್ಮಾಣ ಹಂತದ ಗೇಟ್‌ನ ಸ್ಲ್ಯಾಬ್ ಕುಸಿದು ಬಿದ್ದ ಪರಿಣಾಮ ೧೭ ಕಾರ್ಮಿಕರು ಗಾಯಗೊಂಡಿದ್ದಾರೆ. ನಿನ್ನೆ ರಾತ್ರಿ ೮ ಗಂಟೆ ಸುಮಾರಿಗೆ ಈ ಘಟನೆ ಸಂಭವಿಸಿದೆ. ಕೂಡಲೇ ಸ್ಥಳಕ್ಕೆ ಅಗ್ನಿಶಾಮಕ ದಳ ಮತ್ತು ಎನ್‌ಡಿಆರ್‌ಎಫ್ ಸಿಬ್ಬಂದಿ ಧಾವಿಸಿದ್ದು, ಆಂಬ್ಯುಲೆನ್ಸ್‌ಗಳ ಮೂಲಕ ಗಾಯಾಳುಗಳನ್ನು ವಿವಿಧ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

<><><>

೨೦೨೫ರ ವಿಶ್ವ ಕ್ರೀಡಾಕೂಟದಲ್ಲಿ, ಚೀನಾದ ಚೆಂಗ್ಡುವಿನಲ್ಲಿ ನಡೆದ ಪುರುಷರ ಸಂಯುಕ್ತ ಬಿಲ್ಲುಗಾರಿಕೆ ಸ್ಪರ್ಧೆಯಲ್ಲಿ ಕಂಚಿನ ಪದಕ ಗೆಲ್ಲುವ ಮೂಲಕ ರಿಷಭ್ ಯಾದವ್ ಇತಿಹಾಸ ನಿರ್ಮಿಸಿದ್ದಾರೆ. ಈ ಮೂಲಕ ೨೦೨೫ರ ವಿಶ್ವ ಕ್ರೀಡಾಕೂಟದಲ್ಲಿ, ಭಾರತಕ್ಕೆ ಮೊದಲ ವೈಯಕ್ತಿಕ ಪದಕ ತಂದುಕೊಟ್ಟಿದ್ದಾರೆ. ೨೨ ವರ್ಷದ ರಿಷಭ್ ಯಾದವ್, ಹಿರಿಯ ಅಥ್ಲೆಟ್ ಅಭಿಷೇಕ್ ವರ್ಮಾ ಅವರನ್ನು ೧೪೯-೧೪೭ ಅಂಕಗಳಿಂದ ಸೋಲಿಸಿದರು. ಮಹಿಳಾ ಸಂಯುಕ್ತ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿ ಪರ್ನೀತ್ ಕೌರ್ ಮತ್ತು ಮಧುರಾ ಧಮಂಗಾಂಕರ್ ಸೋಲನುಭವಿಸಿದರು. ಸಂಯುಕ್ತ ಮಿಶ್ರ ತಂಡ ಸ್ಪರ್ಧೆಯಲ್ಲಿ ಅಗ್ರ ಶ್ರೇಯಾಂಕಿತರಾದ ವರ್ಮಾ ಮತ್ತು ಧಮಂಗಾಂಕರ್ ಆರಂಭಿಕ

ಸುತ್ತಿನಲ್ಲಿ ದಕ್ಷಿಣ ಕೊರಿಯಾದ ಮೂನ್ ಯೀಯುನ್ ಮತ್ತು ಲೀ ಯುನ್ಹೋ ಅವರಿಂದ ಪರಾಭವಗೊಂಡರು. ಆಗಸ್ಟ್ ೧೭ ರವರೆಗೆ ನಡೆಯುವ ಈ ಕ್ರೀಡಾಕೂಟಗಳಲ್ಲಿ ೧೭ ಸದಸ್ಯರ ಭಾರತೀಯ ತಂಡ ಸ್ಪರ್ಧಿಸುತ್ತಿದೆ. ೧೯೮೧ ರಿಂದ ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ನಡೆಯುವ ವಿಶ್ವ ಕ್ರೀಡಾಕೂಟವು ಒಲಿಂಪಿಕ್ ಕ್ರೀಡಾಕೂಟದಲ್ಲಿ ಸೇರಿಸದ ಕ್ರೀಡೆಗಳನ್ನು ಪ್ರದರ್ಶಿಸುತ್ತದೆ. ೧೯೮೧ ರಲ್ಲಿ ನಡೆದ ಉದ್ಘಾಟನಾ ಆವೃತ್ತಿಯಿಂದ ಭಾರತ ಈ ಕ್ರೀಡಾಕೂಟಗಳಲ್ಲಿ ಭಾಗವಹಿಸುತ್ತಿದೆ. ದೇಶದ ಏಕೈಕ ಚಿನ್ನದ ಪದಕ ೨೦೧೩ ರಲ್ಲಿ ಬಂದಿತು. ಬಿಲಿಯರ್ಡ್ಸ್‌ನಲ್ಲಿ ಆದಿತ್ಯ ಮೆಹ್ತಾ ಚಿನ್ನದ ಪದಕ ವಿಜೇತರಾದರು. ಬಿಲ್ಲುಗಾರಿಕೆ, ಬಿಲಿಯರ್ಡ್ಸ್, ರೋಲರ್ ಸ್ಕೇಟಿಂಗ್, ವುಶು ಮತ್ತು ರಾಕೆಟ್‌ಬಾಲ್ ಸೇರಿ ಒಟ್ಟು ಐದು ಕ್ರೀಡೆಗಳಲ್ಲಿ ಭಾರತ ಈ ಬಾರಿ ಭಾಗವಹಿಸುತ್ತಿದೆ.

<><><><>

ಮುಂದಿನ ಎಳು ದಿನಗಳ ಕಾಲ ಉತ್ತರಾಖಂಡ ಮತ್ತು ಹಿಮಾಚಲ ಪ್ರದೇಶದಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮುಂದಿನ ೬ ರಿಂದ ೭ ದಿನಗಳಲ್ಲಿ ಪಶ್ಚಿಮ ಬಂಗಾಳ, ಅಸ್ಸಾಂ, ಸಿಕ್ಕಿಂ, ಬಿಹಾರ, ಮೇಘಾಲಯ ಮತ್ತು ಅರುಣಾಚಲ ಪ್ರದೇಶದಲ್ಲಿ ತೀವ್ರ ಮಳೆಯಾಗಲಿದೆ. ಕರಾವಳಿ ಆಂಧ್ರಪ್ರದೇಶ, ಹರಿಯಾಣ, ಚಂಡೀಗಢ, ದೆಹಲಿ, ನಾಗಾಲ್ಯಾಂಡ್, ಮಣಿಪುರ, ಮಿಜೋರಾಂ, ತ್ರಿಪುರ, ಪಂಜಾಬ್, ತಮಿಳುನಾಡು, ಪುದುಚೇರಿ, ಕಾರೈಕಲ್, ತೆಲಂಗಾಣ, ಉತ್ತರ ಪ್ರದೇಶ ಮತ್ತು ಪಶ್ಚಿಮ ಮಧ್ಯಪ್ರದೇಶದಲ್ಲಿ ಇಂದು ಭಾರೀ ಮಳೆಯಾಗುವ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>